<u>ಕರ್ನಾಟಕ ವಿಧಾನ ಪರಿಷತ್ತು</u>

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು** : **ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು)**

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : **2210**

**ಉತ್ತರಿಸಬೇಕಾದ ದಿನಾಂಕ** : **26-03-2026**

**ಉತ್ತರಿಸಬೇಕಾದ ಸಚಿವರು** : **ಸನ್ಮಾನ್ಯ ಮುಖ್ಯಮಂತ್ರಿ**

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಸಹಕಾರ ಸಂಘಗಳಲ್ಲಿ ಮಹಿಳೆಯರ ಪಾತ್ರವನ್ನು ಹೆಚ್ಚಿಸಲು ಸರ್ಕಾರವು ಕೈಗೊಂಡಿರುವ ಕ್ರಮವೇನು; | ಸಹಕಾರ ಸಂಘಗಳಲ್ಲಿ ಮಹಿಳೆಯರ ಪಾತ್ರವನ್ನು ಹೆಚ್ಚಿಸಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.<br>1) ಸಹಕಾರ ಸಂಘಗಳ ಆಡಳಿತ ಮಂಡಳಿ ರಚನೆಯಲ್ಲಿ 02 ಸ್ಥಾನಗಳನ್ನು ಮಹಿಳೆಯರಿಗೆ ಪ್ರತ್ಯೇಕವಾಗಿ ಮೀಸಲಿರಿಸಲಾಗಿದೆ.<br>2) ಸಹಕಾರ ಸಂಘಗಳ ಆಡಳಿತ ಮಂಡಳಿ ಚುನಾವಣೆಯಲ್ಲಿ ಸ್ಪರ್ಧಿಸಲು ಇಚ್ಛಿಸುವ ಮಹಿಳಾ ಅಭ್ಯರ್ಥಿಗಳಿಗೆ ಚುನಾವಣಾ ಠೇವಣಿಯಲ್ಲಿ ಶೇ.50 ರಷ್ಟು ರಿಯಾಯಿತಿಯ ಅವಕಾಶ ಕಲ್ಪಿಸಲಾಗಿರುತ್ತದೆ.<br>3) ಮಹಿಳಾ ಸಹಕಾರ ಸಂಘಗಳ ನೋಂದಣಿ ಶುಲ್ಕದಲ್ಲಿ ಶೇ.50ರಷ್ಟು ರಿಯಾಯಿತಿ ಸೌಲಭ್ಯವಿರುತ್ತದೆ.<br>4) ಗ್ರಾಮೀಣ ಮತ್ತು ಪಟ್ಟಣ ಪ್ರದೇಶದ ಮಹಿಳೆಯರು ಕನಿಷ್ಟ 10 ಮತ್ತು ಗರಿಷ್ಟ 20 ಸದಸ್ಯರನ್ನು ಒಳಗೊಂಡ ಸ್ವ-ಸಹಾಯ ಗುಂಪುಗಳನ್ನು ರಚಿಸಿಕೊಂಡು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಲ್ಲಿ ಮತ್ತು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳಲ್ಲಿ ಉಳಿತಾಯವನ್ನು ಕೈಗೊಳ್ಳಲು ಉತ್ತೇಜಿಸುವುದು ಮತ್ತು ಸ್ವಂತ ಉದ್ಯೋಗವನ್ನು ಕೈಗೊಳ್ಳಲು ಸ್ವ-ಸಹಾಯ ಗುಂಪುಗಳಿಗೆ ಅವಶ್ಯವಿರುವ ಸಾಲವನ್ನು ಒದಗಿಸುವುದು.<br>5) ಎಲ್ಲಾ ವಿಧದ ಸಹಕಾರ ಸಂಘಗಳಲ್ಲಿ ಮಹಿಳೆಯರನ್ನು ಸದಸ್ಯರನ್ನಾಗಿ ನೋಂದಾಯಿಸಲು ಸರ್ಕಾರದಿಂದ ಷೇರು ಸಹಾಯಧನವನ್ನು ನೀಡಲಾಗುತ್ತಿದೆ. (ಗರಿಷ್ಠ ರೂ.500/-) |

| | | |
|---|---|---|
| ಆ) | ಗ್ರಾಮೀಣ ಮಹಿಳೆಯರ ಸಬಲೀಕರಣಕ್ಕಾಗಿ ಸರ್ಕಾರವು ಯಾವುದಾದರೂ ಯೋಜನೆಗಳನ್ನು ರೂಪಿಸಿದೆಯೇ ; | ಹೌದು.<br><br>ಗ್ರಾಮೀಣ ಮತ್ತು ಪಟ್ಟಣ ಪ್ರದೇಶದ ಮಹಿಳಾ ಸ್ವ-ಸಹಾಯ ಗುಂಪುಗಳು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಲ್ಲಿ ಮತ್ತು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳಲ್ಲಿ ವೈಯಕ್ತಿಕ ಮತ್ತು ಕುಟುಂಬ ನಿರ್ವಹಣೆ ಉದ್ದೇಶಕ್ಕಾಗಿ ಪಡೆಯುವ ರೂ.5.00 ಲಕ್ಷಗಳವರೆಗಿನ ಸಾಲವನ್ನು ಶೂನ್ಯ ಬಡ್ಡಿ ದರದಲ್ಲಿ ಮತ್ತು ಸ್ವಂತ ಉದ್ಯೋಗವನ್ನು ಕೈಗೊಂಡು ಆದಾಯ ವೃದ್ಧಿಸಲು ರೂ.5.00 ಲಕ್ಷದಿಂದ ರೂ.10.00 ಲಕ್ಷಗಳವರೆಗಿನ ಸಾಲವನ್ನು ಶೇ.4 ರ ಬಡ್ಡಿ ದರದಲ್ಲಿ ವಿತರಿಸಲು ಸರ್ಕಾರದಿಂದ ಯೋಜನೆಯನ್ನು ರೂಪಿಸಲಾಗಿದೆ. |
| ಇ) | ಸರ್ಕಾರವು ಸಹಕಾರ ಸಂಘಗಳ ಮೂಲಕ ಮಹಿಳೆಯರಿಗೆ ಕೌಶಲ್ಯ ಅಭಿವೃದ್ಧಿಯನ್ನು ನೀಡುತ್ತಿದೆಯೇ; (ಸಂಪೂರ್ಣ ವಿವರ ಒದಗಿಸುವುದು) ಇಲ್ಲದಿದ್ದಲ್ಲಿ, ಭವಿಷ್ಯದಲ್ಲಿ ಸಹಕಾರಿ ಸಂಘಗಳ ಮೂಲಕ ಮಹಿಳೆಯರ ಕೌಶಲ್ಯ ಅಭಿವೃದ್ಧಿಯನ್ನು ಪರಿಗಣಿಸಿ ಸರ್ಕಾರವು ಕ್ರಮ ಕೈಗೊಳ್ಳುವುದೇ? | ಸಹಕಾರ ಇಲಾಖೆಯು, ಸಹಕಾರ ಸಂಘಗಳ ಮೂಲಕ ಮಹಿಳೆಯರಿಗೆ ಕೌಶಲ್ಯಾಭಿವೃದ್ಧಿಯನ್ನು ನೀಡಲು ಯಾವುದೇ ಯೋಜನೆ ರೂಪಿಸಿರುವುದಿಲ್ಲ. ಆದರೆ, ಸಹಕಾರ ಸಂಘಗಳಲ್ಲಿ ರಚಿಸಿರುವ ಸ್ವ-ಸಹಾಯ ಗುಂಪುಗಳ ಸದಸ್ಯರನ್ನು ರಾಷ್ಟ್ರೀಯ ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್ (ಎನ್‌ಆರ್‌ಎಲ್‌ಎಮ್) ಯೋಜನೆಯಡಿಯಲ್ಲಿ ಗ್ರಾಮ ಪಂಚಾಯತಿ ಮಟ್ಟದಲ್ಲಿ ರಚಿಸಿರುವ ಸ್ವಸಹಾಯ ಗುಂಪುಗಳ ಫೆಡರೇಷನ್‌ಗಳಲ್ಲಿ ಸದಸ್ಯತ್ವವನ್ನು ಪಡೆದು ಎನ್‌ಆರ್‌ಎಲ್‌ಎಮ್ ಯುನಿಕ್ ಕೋಡ್ ಗಳನ್ನು ನೀಡುವುದರ ಮೂಲಕ ಸದಸ್ಯರಿಗೆ ಕೌಶಲ್ಯಾಭಿವೃದ್ಧಿಯನ್ನು ನೀಡಲಾಗುತ್ತಿದೆ.<br><br>ಇದಲ್ಲದೇ ಸಹಕಾರ ಸಂಘಗಳು ತಮ್ಮ ಸದಸ್ಯರಿಗೆ ಕೌಶಲ್ಯಾಭಿವೃದ್ಧಿಯನ್ನು ನೀಡಲು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತವೆ.<br><br>1. ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳಲ್ಲಿ ಸ್ವಸಹಾಯ ಗುಂಪುಗಳನ್ನು ರಚಿಸಲು ಮತ್ತು ಅವರ ಸಾಲವನ್ನು ಸಮರ್ಪಕವಾಗಿ ಬಳಕೆ ಮಾಡಿಕೊಳ್ಳುವುದನ್ನು ನಿರ್ವಹಿಸಲು ಪ್ರತ್ಯೇಕವಾಗಿ ಕ್ಷೇತ್ರ ವೀಕ್ಷಕರನ್ನು ನೇಮಕ ಮಾಡಲಾಗಿದೆ.<br><br>2. ಕೌಶಲ್ಯಾಭಿವೃದ್ಧಿ ಇಲಾಖೆಯ ಮತ್ತು ವಿವಿಧ ಇತರೆ ಇಲಾಖೆಗಳಿಂದ ಆಯೋಜಿಸುತ್ತಿರುವ ಮೇಳಗಳಲ್ಲಿ ಸಹಕಾರ ಸಂಸ್ಥೆಗಳು ರಚಿಸಿದ ಸ್ವ-ಸಹಾಯ ಗುಂಪುಗಳ ಸಿದ್ಧ ವಸ್ತುಗಳನ್ನು ಪ್ರದರ್ಶಿಸಲು ಕ್ರಮ ಜರುಗಿಸಲಾಗುತ್ತಿದೆ. ಇದಲ್ಲದೆ ಕೇಂದ್ರ ಸರ್ಕಾರದ GeM (Government e-Market Place) Portal ಅನ್ನು ಸಹಕಾರ ಸಂಘಗಳು ಸಹ ಉಪಯೋಗಿಸಿಕೊಳ್ಳಲು ಅನುಮತಿ ನೀಡಲಾಗಿದೆ. |

| | | |
|---|---|---|
| | | 3. ಅಮೇಜಾನ್‌ನಂತಹ ಖಾಸಗಿ e-Commerce ಸಂಸ್ಥೆಗಳ ಮೂಲಕವೂ ಸಹ ಮಹಿಳಾ ಸ್ವ-ಸಹಾಯ ಗುಂಪುಗಳು ಸಿದ್ಧಪಡಿಸಿರುವ ವಸ್ತುಗಳನ್ನು ಮಾರಾಟ ಮಾಡಲು ಸಂಬಂಧಪಟ್ಟ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕುಗಳ ಮೂಲಕ ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ತರಬೇತಿ ನೀಡಲಾಗಿದೆ.<br><br>4. ಬೀದರ್ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ರಚಿಸಿದ RUDSET (Rural Development and Self Employment Training Institute) ಮೂಲಕ ಸ್ವ-ಸಹಾಯ ಗುಂಪುಗಳಿಗೆ ವಿವಿಧ ಸ್ವಂತ ಉದ್ಯೋಗಗಳ ಬಗ್ಗೆ ತರಬೇತಿ ನೀಡಲಾಗುತ್ತಿದೆ ಹಾಗೂ ಜಿಲ್ಲೆಯಲ್ಲಿ ಚಾಲ್ತಿಯಲ್ಲಿರುವ ತರಬೇತಿ ಸಂಸ್ಥೆಗಳಲ್ಲಿ ಸ್ವ-ಸಹಾಯ ಗುಂಪುಗಳಿಗೆ ತರಬೇತಿ ನೀಡಲು ಜಿಲ್ಲಾ ಸಹಕಾರ ಬ್ಯಾಂಕುಗಳಿಗೆ ನಿಬಂಧಕರು ಸೂಚನೆ ನೀಡಿರುತ್ತಾರೆ.<br><br>5. ಸಹಕಾರ ಸಂಘಗಳ ಮೂಲಕ ಮಹಿಳೆಯರ ಕೌಶಲ್ಯಾಭಿವೃದ್ಧಿಗೆ ಸರ್ಕಾರ ಈಗಾಗಲೇ ಕ್ರಮವಹಿಸಿದ್ದು, ಭವಿಷ್ಯದಲ್ಲಿನ ಬದಲಾವಣೆ ಮತ್ತು ಅವಶ್ಯಕತೆಗೆ ಅನುಗುಣವಾಗಿ ಕ್ರಮವಹಿಸಲಾಗಿದೆ. |

**ಕಡತ ಸಂಖ್ಯೆ: ಸಿಒ 128 ಸಿಎಲ್‌ಎಸ್ 2026**

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ